ಸರ್ಕಾರದ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಿದ ಅನುದಾನದ ರೀತ್ಯಾ ಪ್ರತಿಯೊಂದು ಜಿಲ್ಲೆ ಮತ್ತು ವಿಧಾನಸಭಾ ಕ್ಷೇತ್ರಗಳಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಆಧಾರದ ಮೇಲೆ ಗುರಿಯನ್ನು ನಿಗಧಿಪಡಿಸಿ ಮೇಲ್ಕಂಡ ಯೋಜನೆಯಡಿ ನೆರವು ಕಲ್ಪಿಸಲಾಗಿದೆ.

ಊ) ಸರ್ಕಾರ ಮತ್ತು ಕರ್ನಾಟಕ ಹಾಲು ಮಹಾಮಂಡಳಿ ವತಿಯಿಂದ ಭದ್ರಾವತಿ ಕ್ಷೇತ್ರದಲ್ಲಿ ಹೈನುಗಾರಿಕೆ ತರಬೇತಿ ಕೇಂದ್ರ ಸ್ಥಾಪಿಸುವ ಯೋಜನೆ ಇರುವುದಿಲ್ಲ.

7. **ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ)** :– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭದ್ರಾವತಿ ಕ್ಷೇತ್ರದಲ್ಲಿರುವ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ, ಈ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಇ) ಭದ್ರಾವತಿ ಕ್ಷೇತ್ರದ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ ಹಾಗೂ ಸಿಬ್ಬಂದಿಗಳು ಸರಿಯಾಗಿ ಕೆಲಸ ನಿರ್ವಹಿಸದಿರುವವರ ಬಗ್ಗೆ ಕೈಗೊಂಡಿರುವ ಕ್ರಮವೇನು ? ಹಾಗಿದ್ದಲ್ಲಿ, ಯಾವ ಕ್ರಮ ತೆಗೆದುಕೊಳ್ಳಲಾಗಿದೆ, ವಿವರಿಸಿ.

ಈ) ಭದ್ರಾವತಿ ಕ್ಷೇತ್ರದಲ್ಲಿ ಹೆಚ್ಚಿನ ಜನಸಂಖ್ಯೆಯವರು ಹಿಂದುಳಿದ ಪಂಗಡದವರು ಹಾಗೂ ಕಾರ್ಮಿಕರುಗಳು ಇರುವುದರಿಂದ ಸಾರ್ವಜನಿಕರಿಗೆ ಔಷಧಿಯ ಕೊರತೆಯುಂಟಾಗುತ್ತಿರುವುದರಿಂದ ಇವುಗಳನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

ಉ) ಸರ್ಕಾರಿ ಆಸ್ಪತ್ರೆಯು 100 ಹಾಸಿಗೆಯನ್ನು ಹೊಂದಿದ್ದು, ಹಾಸಿಗೆಗೆ ಬೇಕಾದ ಬೆಡ್ಡುಗಳು, ಬೆಡ್‌ಶೀಟುಗಳು ಸ್ವಚ್ಛತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಊ) ಹಾಗಿದ್ದಲ್ಲಿ, ಈ ಅವ್ಯವಸ್ಥೆಯನ್ನು ಸರಿಪಡಿಸಲು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಬಂದಿದೆ, ಭದ್ರಾವತಿ ಕ್ಷೇತ್ರದಲ್ಲಿರುವ ಸಾರ್ವಜನಿಕ ಆಸ್ಪತ್ರೆಗಳಲ್ಲಿ 22 ಹುದ್ದೆಗಳು ಮಂಜೂರಾಗಿದ್ದು 18 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 4 ವೈದ್ಯರ ಹುದ್ದೆಗಳು ಖಾಲಿ ಇರುತ್ತದೆ.

ಆ) ಇಲಾಖೆಯಲ್ಲಿ ಖಾಲಿಯಿರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು 2008ನೇ ಸಾಲಿನಲ್ಲಿ 815 ವೈದ್ಯರ ಹುದ್ದೆಗಳನ್ನು ಲೋಕಸೇವಾ ಆಯೋಗದಿಂದ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಖಾಲಿ ಇರುವ ವೈದ್ಯರುಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಇ) ಇಲಾಖೆಯಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಸಿಬ್ಬಂದಿಯನ್ನು ಭರ್ತಿ ಮಾಡುವ ಸಲುವಾಗಿ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ ಪ್ರಸಕ್ತ ಸಾಲಿನಲ್ಲಿ 3228 ಹುದ್ದೆಗಳು ಹಾಗೂ 1000 ಹುದ್ದೆಗಳನ್ನು ಒಟ್ಟು 4228 ಹುದ್ದೆಗಳನ್ನು ತುಂಬಲು ಮತ್ತು ಮುಂದಿನ ವರ್ಷ 1017 ಹುದ್ದೆಗಳನ್ನು ತುಂಬಲು ಅನುಮತಿ ನೀಡಿದೆ. ಈ ಬಗ್ಗೆ ವಿಶೇಷ ನಿಯಮಗಳನ್ನು ರೂಪಿಸಿ ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

ಸರಿಯಾಗಿ ಕರ್ತವ್ಯ ನಿರ್ವಹಿಸದಿರುವವರ ಬಗ್ಗೆ ಶಿಸ್ತಿನ ಕ್ರಮ ಜರುಗಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಈ) 2007–08ನೇ ಸಾಲಿನಲ್ಲಿ ಭದ್ರಾವತಿ ತಾಲ್ಲೂಕಿನಲ್ಲಿರುವ ಎಲ್ಲಾ ಆರೋಗ್ಯ ಸಂಸ್ಥೆಗಳ ಒಟ್ಟು ಅನುದಾನ ರೂ. 26,99,086/– ಇದ್ದು, ಇದರಲ್ಲಿ ರೂ. 23,64,103/–ಗಳ ಮೊತ್ತದ ಔಷಧಿಗಳನ್ನು ಸರಬರಾಜು ಮಾಡಲಾಗಿದೆ ಹಾಗೂ ಕಾಲರಾ, ಚಿಕನ್‌ಗುನ್ಯಾ, ನೆರೆಹಾವಳಿಯಂತಹ ವಿಶೇಷ ಸಂದರ್ಭಗಳಲ್ಲಿ ಇನ್ನೂ ಹೆಚ್ಚುವರಿಯಾಗಿ ಬೇಕಾಗಿರುವ ಔಷಧಿಗಳನ್ನು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇವುಗಳಲ್ಲಿ Untied Funds ಅಡಿಯಲ್ಲಿ 1) ಆರೋಗ್ಯ ಉಪ ಕೇಂದ್ರಗಳಿಗೆ – 10 ಸಾವಿರ, 2) ಗ್ರಾಮ ಆರೋಗ್ಯ ಉಪ ಸಮಿತಿಗಳಿಗೆ ರೂ. – 10 ಸಾವಿರ, 3) ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ – 75 ಸಾವಿರ, 4) ಸಮುದಾಯ ಆರೋಗ್ಯ ಕೇಂದ್ರ/ತಾಲ್ಲೂಕು

ಮಟ್ಟದ ಆಸ್ಪತ್ರೆಗಳಿಗೆ ರೂ. – 1 ಲಕ್ಷ ಹಾಗೂ ಆಸ್ಪತ್ರೆಯ Users Funds ನಲ್ಲೂ ಸಹ ಅವಶ್ಯಕತೆಗನುಗುಣವಾಗಿ ಔಷಧಿಗಳನ್ನು ಸ್ಥಳೀಯವಾಗಿ ಖರೀದಿಸಲಾಗುತ್ತದೆ.

ಅಲ್ಲದೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಒಳಪಡುವ ಆರೋಗ್ಯ ಸಂಸ್ಥೆಗಳ ಆಡಳಿತ ವೈದ್ಯಾಧಿಕಾರಿಗಳು ಔಷಧಿಗಳ ಕೊರತೆಯಿರುವುದಾಗಿ ಪ್ರಸ್ತಾವನೆ ಸಲ್ಲಿಸಿದಲ್ಲಿ ಅಗತ್ಯತೆಗೆ ತಕ್ಕಂತೆ ಹೆಚ್ಚುವರಿಯಾಗಿ ಔಷಧಿಗಳನ್ನು ಸರ್ಕಾರಿ ಔಷಧಿ ಮಳಿಗೆ ಅನುದಾನದಲ್ಲಿ ಪೂರೈಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಊ) ಈ ಆಸ್ಪತ್ರೆಯ ಯೂಸರ್ಸ್ ಚಾರ್ಜ್ ನಿಧಿಯಲ್ಲಿ ಅವಶ್ಯಕವಿರುವ ಬೆಡ್‌ಶೀಟ್‌ಗಳನ್ನು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಶಿವಮೊಗ್ಗ ಇವರಿಂದ ಖರೀದಿಸಲಾಗಿದೆ. ಹಾಗೂ ಹಾಸಿಗೆಗಳನ್ನು ದುರಸ್ತಿಪಡಿಸಲಾಗಿದೆ. ಈ ಆಸ್ಪತ್ರೆಯಲ್ಲಿ ನಾನ್ ಕ್ಲಿನಿಕಲ್ ಗುತ್ತಿಗೆದಾರರಿಂದ ಬೆಡ್‌ಶೀಟ್‌ಗಳನ್ನು ಸ್ವಚ್ಛಗೊಳಿಸಲಾಗುತ್ತಿದೆ.

ಊ) ಉದ್ಭವಿಸುವುದಿಲ್ಲ.

95. ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) :– ಮಾನ್ಯ ಕಾರ್ಮಿಕ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಅತೀ ಬಡವರು, ಹಿಂದುಳಿದ ವರ್ಗದವರು ಅಧಿಕವಾಗಿದ್ದು, ನಿರುದ್ಯೋಗಿಗಳ ಸಂಖ್ಯೆಯು ಅಧಿಕವಾಗಿರುವುದರಿಂದ ಶ್ರೀ ನಂಜುಂಡಪ್ಪ ವರದಿಯ ಪ್ರಕಾರ ಈ ತಾಲ್ಲೂಕನ್ನು ಹಿಂದುಳಿದ ತಾಲ್ಲೂಕೆಂದು ಘೋಷಿಸಿರುವುದು ನಿಜವೇ ?

ಆ) ಹಾಗಿದ್ದಲ್ಲಿ, ಈ ತಾಲ್ಲೂಕಿನಲ್ಲಿ ಕಳೆದ ವರ್ಷದಿಂದ ಅನೇಕ ಕಾರ್ಖಾನೆಗಳು ಸ್ಥಾಪನೆಯಾಗಿದ್ದರೂ ಈ ಭಾಗಕ್ಕೆ ಐ.ಟಿ.ಐ. ತರಬೇತಿ ಕೇಂದ್ರವನ್ನು ಸ್ಥಾಪನೆ ಮಾಡದಿರಲು ಕಾರಣವೇನು ?

ಇ) ಹಾಗಾದರೆ, ಪ್ರಸಕ್ತ ಆರ್ಥಿಕ ವರ್ಷದಲ್ಲಿ ಐ.ಟಿ.ಐ. ತರಬೇತಿ ಕೇಂದ್ರವನ್ನು ಪ್ರಾರಂಭಿಸಲು ಸರ್ಕಾರವು ಮಂಜೂರಾತಿ ನೀಡುವುದರಿಂದ ಈ ಭಾಗದ ನಿರುದ್ಯೋಗಿ ಯುವಕರಿಗೆ ತರಬೇತಿ ಪಡೆದು ಉದ್ಯೋಗ ಪಡೆಯುವಂತಾಗಲು ಕ್ರಮ ಕೈಗೊಳ್ಳಲಾಗುವುದೇ ?